# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಜಪಮಾಲೆ ಉಪಾಧ್ಯಕ್ಷರು, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 16–05–2016 ರ ಕಾರಣ ಕೇಳುವ ನೋಟೀಸ್.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂಚಾ/ಕೌನ್ಸಿಲ್/186/2015–16 ದಿನಾಂಕ: 23–01–2016.
3. ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 22–04–2016.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂಚಾ/ಕೌನ್ಸಿಲ್/34/2016–17 ದಿನಾಂಕ: 13–02–2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿನಾಂಕ: 23-01-2016 ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ ರವರ ಪತ್ರದಲ್ಲಿ ಶ್ರೀ ಜಪಮಾಲೆ ಉಪಾಧ್ಯಕ್ಷರು, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರು ಅಕ್ರಮವಾಗಿ ಗ್ರಾ.ಪಂ.ಗೆ ಬೀಗ ಹಾಕಿರುವುದಾಗಿ ಹಾಗೂ ರಾಷ್ಟ್ರಧ್ವಜವನ್ನು ಸೂರ್ಯಸ್ತ ಮುಂಚೆಯೇ ದುಂಡಾವರ್ತನೆಯಿಂದ ಕೆಳಗೆ ಇಳಿಸಿರುವುದಾಗಿ ಹಾಗೂ 2015–16ನೇ ಸಾಲಿನ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಲ್ಲಿ ಕೂಲಿ ಕೋರಿಕೆ ಪತ್ರ (ನಮೂನೆ–6) ಸಲ್ಲಿಸದೆ ಕೆರೆ ಅಭಿವೃದ್ಧಿ ಕಾಮಗಾರಿ ಮಾಡಿಸಿರುವುದಾಗಿ ಈ ದುರ್ನಡತೆಯ ಬಗ್ಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ರಂತೆ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀ ಜಪಮಾಲೆ ಉಪಾಧ್ಯಕ್ಷರು, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರಿಗೆ ದಿನಾಂಕ:16–05–2016 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಶ್ರೀ ಜಪಮಾಲೆ ಉಪಾಧ್ಯಕ್ಷರು, ರವರ ದಿನಾಂಕ: 24–08–2016 ರಂದು ಲಿಖಿತ ಉತ್ತರ ನೀಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಶ್ರೀ ಜಪಮಾಲೆ ಉಪಾಧ್ಯಕ್ಷರು, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರು ದಿನಾಂಕ: 22–04–2016 ರಂದು ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ದಿನಾಂಕ: 24–08–2016 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಹಾಜರಾಗಿರುತ್ತಾರೆ.

ಪ್ರಕರಣದಲ್ಲಿ ಸಂಬಂಧಪಟ್ಟ ದಾಖಲಾತಿಗಳನ್ನು ಪರಿಶೀಲಿಸಲಾಗಿ ಶ್ರೀ ಜಪಮಾಲೆ ಉಪಾಧ್ಯಕ್ಷರು, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ರವರು ದುರ್ವರ್ತನೆ ಹಾಗೂ ರಾಷ್ಟ್ರಧ್ವಜಕ್ಕೆ ಅಗೌರವ ಕೋರಿರುವುದು ಸಾಬೀತಾಗಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರಂತೆ ಮಾರ್ಟಳ್ಳಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಸ್ಥಾನದಿಂದ ಹಾಗೂ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/431/ಗ್ರಾಪಂಅ/2016**
**ಬೆಂಗಳೂರು, ದಿನಾಂಕ: 21-10-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಪಮಾಲೆ ಉಪಾಧ್ಯಕ್ಷರು, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರು ಅಕ್ರಮವಾಗಿ ಗ್ರಾಮ ಪಂಚಾಯತಿಗೆ ಬೀಗ ಹಾಕಿರುವುದಾಗಿ ಹಾಗೂ ರಾಷ್ಟ್ರಧ್ವಜವನ್ನು ಸೂರ್ಯಾಸ್ತ ಮುಂಚೆಯೇ ದುಂಡಾವರ್ತನೆಯಿಂದ ಕೆಳಗೆ ಇಳಿಸಿರುವುದಾಗಿ ಹಾಗೂ 2015-16ನೇ ಸಾಲಿನ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಲ್ಲಿ ಕೂಲಿ ಕೋರಿಕೆ ಪತ್ರ (ನಮೂನೆ-6) ಸಲ್ಲಿಸದೆ ಕೆರೆ ಅಭಿವೃದ್ಧಿ ಕಾಮಗಾರಿ ಮಾಡಿಸಿರುವುದಾಗಿ ದುರ್ನಡತೆ ಎಸಗಿರುವುದು ಸಾಬೀತಾಗಿರುವುದರಿಂದ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಮಾರ್ಟಳ್ಳಿ ಗ್ರಾಮ ಪಂಚಾಯತಿಯ ಉಪಾಧ್ಯಕ್ಷ ಸ್ಥಾನದಿಂದ ಹಾಗೂ ಸದಸ್ಯತ್ವದಿಂದ ತೆಗೆದುಹಾಕಿ ಆದೇಶಿಸಿದೆ.

(ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ
ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/10/17
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳ**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ
3) ಶ್ರೀ ಜಪಮಾಲೆ ಉಪಾಧ್ಯಕ್ಷರು, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಾರ್ಟಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.